# ನಿಮ್ಮೊಡನೆ

## ಎಳೆಯರ ತಂಬಾಕು ಚಟ

ಧೂಮಪಾನ, ತಂಬಾಕು ಉತ್ಪನ್ನಗಳ ಸೇವನೆಯ ಕೆಟ್ಟ ಪರಿಣಾಮಗಳ ಬಗ್ಗೆ ಜನರಲ್ಲಿ ತಿಳುವಳಿಕೆ ಮೂಡಿಸಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಪ್ರಚಾರಾಂದೋಲವನ್ನೇ ಆರಂಭಿಸಿವೆ. ಪ್ರತಿ ವರ್ಷ ಕೋಟ್ಯಂತರ ರೂಪಾಯಿ ಹಣ ಖರ್ಚು ಮಾಡಿ ಜಾಹೀರಾತು ನೀಡುತ್ತಿವೆ. ವಿರೋಧಾಭಾಸದ ಸಂಗತಿ ಎಂದರೆ ಹೊಗೆಸೊಪ್ಪು ಉತ್ಪನ್ನಗಳ ತಯಾರಿಕೆಯೂ ಅನಿರ್ಬಾಧಿತವಾಗಿ ಮುಂದುವರಿದಿದೆ.

ಶಾಲಾ, ಕಾಲೇಜುಗಳ ವಿದ್ಯಾರ್ಥಿಗಳು ಧೂಮಪಾನ ಮಾಡುವುದನ್ನು ತಪ್ಪಿಸಲು ಸರ್ಕಾರ ಕೆಲ ಕ್ರಮಗಳನ್ನು ತೆಗೆದುಕೊಂಡಿದೆ. ಅದರ ಭಾಗವಾಗಿಯೇ ಶಾಲಾ, ಕಾಲೇಜುಗಳ ಸಮೀಪದ ಅಂಗಡಿಗಳಲ್ಲಿ ಬೀಡಿ, ಸಿಗರೇಟು ಹಾಗೂ ಹೊಗೆಸೊಪ್ಪಿನ ಉತ್ಪನ್ನಗಳ ಮಾರಾಟವನ್ನು ನಿಷೇಧಿಸಿದೆ. ಅದರೂ ಕೆಲವು ಅಂಗಡಿಗಳಲ್ಲಿ ಇವುಗಳ ಮಾರಾಟ ನಡೆಯುತ್ತಲೇ ಇದೆ ಎಂಬ ದೂರುಗಳು ಕೇಳಿ ಬರುತ್ತಿವೆ. ಅದು ನಿಜವೂ ಹೌದು. ಬೀಡಿ, ಸಿಗರೇಟು ಮಾರಾಟ ಮಾಡುವ ಅಂಗಡಿಗಳ ವಿರುದ್ಧ ಕ್ರಮ ಜರುಗಿಸುವ ಅಧಿಕಾರವನ್ನು ಸರ್ಕಾರ ಪೊಲೀಸರು ಮತ್ತು ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ನೀಡಿದೆ. ಈ ಅಧಿಕಾರವನ್ನು ಆಯಾ ಶಾಲಾ, ಕಾಲೇಜುಗಳ ಮುಖ್ಯಸ್ಥರಿಗೆ ನೀಡಿದರೆ ಹೆಚ್ಚು ಪರಿಣಾಮಕಾರಿಯಾದೀತು ಎಂಬುದು ಕೇಂದ್ರ ಸರ್ಕಾರದ ಇತ್ತೀಚಿನ ಚಿಂತನೆ. ಈ ಬೆಳವಣಿಗೆ ಸ್ವಾಗತಾರ್ಹ. ಈ ಕುರಿತಂತೆ ಸದ್ಯದಲ್ಲೇ ಅಧಿಸೂಚನೆಯೊಂದನ್ನು ಹೊರಡಿಸಲು ಕೇಂದ್ರ ಸರ್ಕಾರದ ಕಾನೂನು ಸಚಿವಾಲಯ ಪರಿಶೀಲಿಸುತ್ತಿದೆ. ಅಧಿಸೂಚನೆ ಹೊರಬಿದ್ದ ನಂತರ ಪರಿಸ್ಥಿತಿ ಸುಧಾರಿಸಬಹುದು. ಶಾಲಾ, ಕಾಲೇಜುಗಳ ಮುಖ್ಯಸ್ಥರು ಮನಸ್ಸು ಮಾಡಿದರೆ ವಿದ್ಯಾರ್ಥಿಗಳಿಗೆ ಬೀಡಿ, ಸಿಗರೇಟು, ಹೊಗೆಸೊಪ್ಪಿನ ಉತ್ಪನ್ನಗಳು ಸುಲಭವಾಗಿ ಸಿಕ್ಕದಂತೆ ತಡೆಯಲು ಸಾಧ್ಯವಿದೆ.

ಶಾಲಾ, ಕಾಲೇಜುಗಳ ಸಮೀಪದ ಅಂಗಡಿಗಳಲ್ಲಿ ಬೀಡಿ, ಸಿಗರೇಟು ಇತ್ಯಾದಿಗಳ ಮಾರಾಟವನ್ನು ನಿಷೇಧಿಸಿ ಹಲವು ವರ್ಷಗಳೇ ಕಳೆದಿವೆ. ಲೇಖನ ಸಾಮಗ್ರಿಗಳ ಜತೆಗೆ ಬೀಡಿ, ಸಿಗರೇಟು ಮಾರಾಟ ಮಾಡುವ ಅಂಗಡಿಗಳ ಮಾಲೀಕರ ವಿರುದ್ಧ ಕ್ರಮ ಜರುಗಿಸಲು ಪೊಲೀಸರಿಗೆ ಅಥವಾ ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ದೂರು ನೀಡಬೇಕು. ದೂರು ಪಡೆದ ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಬಂದು ಪರಿಶೀಲಿಸಿ ಮುಂದಿನ ಕ್ರಮ ತೆಗೆದುಕೊಳ್ಳುವುದಕ್ಕೆ ಸಾಕಷ್ಟು ಸಮಯ ಬೇಕಾಗುತ್ತದೆ. ಅದರ ಬದಲು ಶಾಲಾ, ಕಾಲೇಜುಗಳ ಮುಖ್ಯಸ್ಥರೇ ಅಂಗಡಿ ಮಾಲೀಕರ ವಿರುದ್ಧ ಕ್ರಮ ಜರುಗಿಸಲು ಸಾಧ್ಯವಾದರೆ ಪರಿಸ್ಥಿತಿಯಲ್ಲಿ ಸುಧಾರಣೆ ಆದೀತು ಎಂಬುದು ಸರ್ಕಾರದ ಉದ್ದೇಶ. ಶಾಲಾ, ಕಾಲೇಜುಗಳ ಮುಖ್ಯಸ್ಥರಿಗೆ ಬೀಡಿ, ಸಿಗರೇಟು ಮಾರುವ ಅಂಗಡಿ ಮಾಲೀಕರಿಗೆ ದಂಡ ವಿಧಿಸುವ ಅಧಿಕಾರ ಕೊಡುವುದೇ ಹೆಚ್ಚು ಸೂಕ್ತ. ಶಾಲಾ, ಕಾಲೇಜುಗಳ ಮುಖ್ಯಸ್ಥರು ಅಂಗಡಿಗಳ ಮಾಲೀಕರ ಮೇಲೆ ಕಣ್ಣಿಡುವುದರ ಜತೆಗೆ ವಿದ್ಯಾರ್ಥಿಗಳ ಮೇಲೂ ನಿಗಾ ಇಡಬೇಕು. ಒಟ್ಟಾರೆ ವಿದ್ಯಾರ್ಥಿಗಳು ಧೂಪಮಾನ ಮಾಡುವುದನ್ನು ತಡೆಯಬೇಕು. ಸರ್ಕಾರ ಆದಷ್ಟು ಬೇಗ ಅಧಿಸೂಚನೆ ಹೊರಡಿಸಬೇಕು.

ಧೂಮಪಾನ ಮಾಡುವುದು, ಗುಟ್ಕಾ, ಹೊಗೆಸೊಪ್ಪು ಜಗಿಯುವುದು ಆರೋಗ್ಯಕ್ಕೆ ಹಾನಿಕರ ಎನ್ನುವುದು ನಮ್ಮ ಜನರಿಗೆ ಗೊತ್ತಿದೆ. ಆದರೂ ಇವುಗಳ ಚಟ ಅಂಟಿಸಿಕೊಂಡವರು ಅದನ್ನು ಬಿಡಲಾಗದೆ ಒದ್ದಾಡುತ್ತಿದ್ದಾರೆ. ಮಕ್ಕಳೂ ಇಂತಹ ಚಟಗಳಿಗೆ ದಾಸರಾದರೆ ಅದರಿಂದ ಅವರು ಹೊರಬರಲು ಸಾಧ್ಯವಾಗುವುದಿಲ್ಲ. ಈ ಚಟಗಳಿಂದ ಆರೋಗ್ಯ ಹಾಳಾಗುತ್ತದೆ ಎನ್ನುವುದು ಅವರಿಗೆ ಅನುಭವಕ್ಕೆ ಬರುವ ವೇಳೆಗೆ ಪರಿಸ್ಥಿತಿ ಕೈ ಮೀರಿರುತ್ತದೆ. ಅಧಿಕೃತ ಮೂಲಗಳ ಪ್ರಕಾರ, ನಮ್ಮ ದೇಶದಲ್ಲಿ ಪ್ರತಿ ವರ್ಷ 7 ರಿಂದ 10 ಲಕ್ಷ ಧೂಮಪಾನಿಗಳು ಬಾಯಿ ಹಾಗೂ ಶ್ವಾಸಕೋಶದ ಕ್ಯಾನ್ಸರ್‌ಗೆ ಬಲಿಯಾಗುತ್ತಾರೆ. ಇನ್ನೂ ಅನೇಕರು ನಾನಾ ಬಗೆಯ ಕಾಯಿಲೆಗಳಿಗೆ ತುತ್ತಾಗುತ್ತಾರೆ. ಸಾರ್ವಜನಿಕವಾಗಿ ಧೂಮಪಾನ ಮಾಡುವುದನ್ನು ದೇಶದ ಅನೇಕ ರಾಜ್ಯಗಳು ನಿಷೇಧಿಸಿವೆ. ಆದರೂ ಧೂಮಪಾನ ಮಾಡುವವರ ಸಂಖ್ಯೆ ಕಡಿಮೆಯಾಗಿಲ್ಲ. ಆದ್ದರಿಂದ ಎಳೆಯ ಮಕ್ಕಳು ಧೂಮಪಾನದ ಚಟ ಬೆಳೆಸಿಕೊಳ್ಳುವುದನ್ನು ಹೇಗಾದರೂ ಮಾಡಿ ತಡೆಯಲೇಬೇಕು.

ಧೂಮಪಾನ, ತಂಬಾಕು ಉತ್ಪನ್ನಗಳ ಸೇವನೆಯ ಕೆಟ್ಟ ಪರಿಣಾಮಗಳ ಬಗ್ಗೆ ಜನರಲ್ಲಿ ತಿಳುವಳಿಕೆ ಮೂಡಿಸಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಪ್ರಚಾರಾಂದೋಲವನ್ನೇ ಆರಂಭಿಸಿವೆ. ಪ್ರತಿ ವರ್ಷ ಕೋಟ್ಯಂತರ ರೂಪಾಯಿ ಹಣ ಖರ್ಚು ಮಾಡಿ ವಿವಿಧ ಮಾಧ್ಯಮಗಳಲ್ಲಿ ಜಾಹೀರಾತು ನೀಡುತ್ತಿವೆ. ವಿರೋಧಾಭಾಸದ ಸಂಗತಿ ಎಂದರೆ ಸಿಗರೇಟು, ಬೀಡಿ, ಗುಟ್ಕ ಮತ್ತಿತರ ಹೊಗೆಸೊಪ್ಪು ಉತ್ಪನ್ನಗಳ ತಯಾರಿಕೆಯೂ ಅನಿರ್ಬಾಧಿತವಾಗಿ ಮುಂದುವರಿದಿದೆ. ಧೂಮಪಾನದ ವಿರುದ್ಧ ಜನಜಾಗೃತಿ ಮೂಡಿಸುವ ಪ್ರಯತ್ನ ಶ್ಲಾಘನೀಯ. ಆದರೆ ಹೊಗೆಸೊಪ್ಪು ಉತ್ಪನ್ನಗಳ ಉತ್ಪಾದನೆಯನ್ನು ನಿಯಂತ್ರಿಸುವ ಕುರಿತೂ ಸರ್ಕಾರ ಚಿಂತನೆ ನಡೆಸಬೇಕು. ಕ್ಯಾನ್ಸರ್ ನಿಯಂತ್ರಣ ಔಷಧಗಳ ತಯಾರಿಕೆ ಮತ್ತು ಸಂಶೋಧನೆಗೆ ಸರ್ಕಾರ ಭಾರೀ ಮೊತ್ತದ ಹಣ ಖರ್ಚು ಮಾಡುತ್ತಿದೆ. ಜನರ ಆರೋಗ್ಯಕ್ಕೆ ಹೆಚ್ಚು ಹಾನಿ ಮಾಡುವ ಹೊಗೆಸೊಪ್ಪಿನ ಉತ್ಪನ್ನಗಳನ್ನು ಸಂಪೂರ್ಣ ನಿಷೇಧಿಸುವ ಕುರಿತೂ ಸರ್ಕಾರ ಪರಿಶೀಲಿಸಬೇಕು.

■ ಪ್ರೇಮಕುಮಾರ್ ಹರಿಯಬ್ಬೆ

